# ವಾಸ್ತುಶಿಲ್ಪ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಹಳ ಹಿಂದಿನ ಕಾಲದಿಂದಲೂ ಬಹಳ ಅವಿನಾಭಾವ ಸಂಬಂಧ ಹೊಂದಿರುವ ಗುರು ಮತ್ತು ಶಿಷ್ಯ ಪರಂಪರೆ, ಇತ್ತೀಚಿನ ದಿನಗಳಲ್ಲಿ ಮಹತ್ವ ಕಳೆದುಕೊಳ್ಳುತ್ತಿದೆ ಎಂದು ವಾಸ್ತುಶಿಲ್ಪಿ ಪ್ರೊ. ಮಂಜುನಾಥ ಕಳವಳ ವ್ಯಕ್ತಪಡಿಸಿದರು.

ನಗರದ ಗೋಪಾಲನ್ ತಾಂತ್ರಿಕ ವಿದ್ಯಾಲಯದಲ್ಲಿ ಎಂಜಿನಿಯರಿಂಗ್ ಹಾಗೂ ವಾಸ್ತುಶಿಲ್ಪ ಕೋರ್ಸ್ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಪ್ರಗತಿಗಾಗಿ ಕಾಲೇಜು ದಿನಗಳಲ್ಲಿಯೇ ಶ್ರಮಿಸಬೇಕಿದೆ ಎಂದರು.

ದಿವಂಗತ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಜೀವನದಲ್ಲಿ ತುಂಬಾ ಶಿಸ್ತು, ಸಂಯಮ ಅಳವಡಿಸಿಕೊಂಡಿದ್ದರು. ಅವರ ಆದರ್ಶಗಳನ್ನು ಇಂದಿನ ಯುವಪೀಳಿಗೆ ಕಾಯಾ, ವಾಚಾ ಮನಸಾ ಅಳವಡಿಸಿಕೊಂಡರೆ, ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯವಾಗಲಿದೆ. ಆ ಆದರ್ಶಗಳೇ ಜೀವನ ರೂಪಿಸಲಿವೆ ಎಂದು ಸಲಹೆ ನೀಡಿದರು.

ಇದೇ ವೇಳೆ 171 ಎಂಜಿನಿಯರಿಂಗ್ ಹಾಗೂ 23 ವಾಸ್ತುಶಿಲ್ಪ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ರ‍್ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ವಾಸ್ತುಶಿಲ್ಪ ವಿಭಾಗದ ಡೀನ್ ಪ್ರೊ. ಕೆ.ವಿ.ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ಫೌಂಟೇನ್ ಹೆಡ್ ಸಂಸ್ಥೆಯ ಸ್ಥಾಪಕ ಕೆ. ಜಯಸಿಂಹ, ವಾಸ್ತುಶಿಲ್ಪಿ ಜಿ.ಎಸ್. ಗಾಯತ್ರಿ, ಡಾ. ಅನಂತಕೃಷ್ಣ, ಪ್ರೊ. ಅನಿತಾ ಧರ್ಮಪಾಲ್ ಅವರನ್ನು ಸನ್ಮಾನಿಸಲಾಯಿತು.



ಗೋಪಾಲನ್ ತಾಂತ್ರಿಕ ವಿದ್ಯಾಲಯದಲ್ಲಿ ಎಂಜಿನಿಯರಿಂಗ್ ಹಾಗೂ ವಾಸ್ತುಶಿಲ್ಪ ಕೋರ್ಸ್ ವಿದ್ಯಾರ್ಥಿಗಳಿಗೆ ವಾಸ್ತುಶಿಲ್ಪಿ ಪ್ರೊ. ಮಂಜುನಾಥ ಪದವಿ ಪ್ರದಾನ ಮಾಡಿದರು.